# ಶೈಕ್ಷಣಿಕ ಕಿಟ್ ವಿತರಣೆ

**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ಸರಕಾರಿ ಶಾಲಾ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಕಿಟ್‌ಗಳನ್ನು ವಿತರಿಸಲಾಯಿತು.

ತಾಲೂಕಿನ ವಿವಿಧ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 30ಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಕಲಿಕೆಗೆ ಅವಶ್ಯವಿರುವ ನೋಟ್ ಬುಕ್, ಕಂಪಾಸ್ ಮತ್ತಿತರ ಸಾಮಗ್ರಿಗಳನ್ನು ಮಹಾವಿದ್ಯಾಲಯದ ವತಿಯಿಂದ ವಿತರಿಸಲಾಯಿತು.

ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಕಿಟ್ ವಿತರಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ, ಶಾಲಾ ವಿದ್ಯಾರ್ಥಿಗಳಿಗೆ ಕಲಿಕೆಗೆ ಅನುಕೂಲಕರವಾಗುವ ದೃಷ್ಟಿಯಿಂದ ಮಹಾವಿದ್ಯಾಲಯವು ಈ ಕಾರ್ಯಕ್ರಮ ಆಯೋಜಿಸಿದೆ ಎಂದರು.

ಈ ಸಂದರ್ಭದಲ್ಲಿ ಪ್ರೊ. ಮಂಜುನಾಥ್, ಡಾ. ರವೀಂದ್ರ ಮುನ್ನೊಳ್ಳಿ, ಪ್ರೊ. ಫರಝಾನಾ ನದಾಫ್ ಸೇರಿದಂತೆ ವಿವಿಧ ವಿಭಾಗದ ಡೀನ್‌ಗಳು ಹಾಗೂ ವಿಭಾಗ ಮುಖ್ಯಸ್ಥರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಮಹಾವಿದ್ಯಾಲಯದ ಸಹಕಾರಿ ಸಂಘದ ವತಿಯಿಂದ ಪ್ರೊ. ರಂಗನಾಥ ಪಾಟೀಲ್ ಹಾಗೂ ಸುನೀಲ್ ಯರಗಟ್ಟಿ ಈ ಕಾರ್ಯಕ್ರಮವನ್ನು ಆಯೋಜಿಸಿದ್ದರು.

